**ಎರಡನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ ದ ನ್ಯಾದಂ ನ್ಯಾಯಾಲಯ, ಮದ್ದೂರು.**

**ಸಿಸಿ 478/2024**

| | | | |
|---|---|---|---|
| **ಸಾಕ್ಷಿದಾರರ ಹೆಸರು** | - | ಶ್ರೀನಿವಾಸಚಾರಿ | **ಚಾ.ಸಾ.-8** |
| **ತಂದೆ ಹೆಸರು** | - | ಲೇ ಈಶ್ವರಚಾರ್ | **ಫ್ರಾ.ಸಾ.-3** |
| **ವಯಸ್ಸು** | - | 54 ವರ್ಷ | |
| **ಉದ್ಯೋಗ** | - | ಎಎಸ್ ಐ | |
| **ವಾಸ ಸ್ಥಳ** | - | ಮದ್ದೂರು | |

ದಿನಾಂಕಃ 09-12-2025 ರಂದು ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಅಭಿಯೋಜನೆಯ ಪರಃ ಎ ಪಿ ಪಿ ರವರಿಂದಃ**

ನಾನು ಆಗಸ್ಟ್ 2021 ರಿಂದ ಇಲ್ಲಿಯವರೆಗೂ ಮದ್ದೂರು ಪೋಲೀಸ್ ಠಾಣೆಯಲ್ಲಿ ಎ ಎಸ್ ಐ ಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ.

ದಿನಾಂಕಃ 23-01-2024 ರಂದು ನಾನು ಠಾಣಾ ಉಸ್ತುವಾರಿಯಲ್ಲಿದ್ದಾಗ ಚಾಸಾ-1 ರವರು ಠಾಣೆಗೆ ಹಾಜರಾಗಿ ನೀಡಿದ ಬೆರಳಚ್ಚು ಮಾಡಿಸಿದ ದೂರನ್ನು ಠಾಣಾ ಮೊಕದ್ದಮೆ ಸಂಖ್ಯೆ 16/2024 ರಂತೆ ದಾಖಲು ಮಾಡಿಕೊಂಡು, ಪ್ರಥಮ ವರ್ತಮಾನ ವರದಿಯನ್ನು ನ್ಯಾಯಾಲಯಕ್ಕೆ ಮತ್ತು ನಮ್ಮ ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ. ನಂತರ ದಿಃ24-01-2024 ರಂದು ಕೃತ್ಯ ನಡೆದ ಸ್ಥಳಕ್ಕೆ ಭೇಟಿ ನೀಡಿ, ಚಾ.ಸಾ.2 ರವರು ತೋರಿಸಿದ ಸ್ಥಳದಲ್ಲಿ ಪಂಚರಾದ ಚಾಸಾ-5 ಮತ್ತು 6 ರವರ ಸಮಕ್ಷಮ ಬೆಳಿಗ್ಗೆ 11-30 ರಿಂದ 12-30 ಗಂಟೆಯವರೆಗೆ ಮಹಜರ್ ಕ್ರಮ ಜರುಗಿಸಿರುತ್ತೇನೆ. ಸದರಿ ಮಹಜರ್ ನ್ನು ಚಾಸಾ-7 ಗಿರೀಶ್ ತನಿಖಾ ಸಹಾಯಕರು ಬೆರಳಚ್ಚು ಮಾಡಿರುತ್ತಾರೆ. ನಂತರ ಚಾಸಾ-7 ರವರು ಮಹಜರ್ ಸಮಯದಲ್ಲಿ ಪೋಟೋ ತೆಗೆದಿದ್ದು ಪೋಟೋ ಮತ್ತು ಸಿ ಡಿ ಗೆ ಸಂಬಂಧಿಸಿದಂತೆ ಭಾ ದಂ ಸಂ ಕಲಂಃ 65 ರಡಿಯಲ್ಲಿ ಪ್ರಮಾಣಪತ್ರ ಪಡೆದು ಕಡತಕ್ಕೆ ಅಳವಡಿಸಿಕೊಡಿಂರುತ್ತೇನೆ. ನಂತರ ಪ್ರತ್ಯಕ್ಷ ಸಾಕ್ಷಿ ಮತ್ತು ಗಾಯಾಳುವಾದ ಚಾಸಾ-4 ಮತ್ತು ಚಾಸಾ-2 ರವರ ಹೇಳಿಕೆಯನ್ನು ದಾಖಲಿಸಿಕೊಂಡಿರುತ್ತೆನೆ. ಚಾಸಾ-1 ರವರ ಮರುಹೇಳಿಕೆ ದಾಖಲು ಮಾಡಿಕೊಂಡಿರುತ್ತೇನೆ. ನಂತರ ಚಾಸಾ-9 ರವರಿಗೆ ಕಡತವನ್ನು ಮುಂದಿನ ತನಿಖೆಗಾಗಿ ಹಸ್ತಾಂತರಿಸಿರುತ್ತೇನೆ.

ದೂರನ್ನು ನಿಪಿ-1 ಎಂದು ಈಗಾಗಲೇ ಗುರುತಿಸಲಾಗಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿ.ಪಿ. 1(ಬಿ) ಎಂದು ಗುರುತಿಸಲಾಯಿತು, ಪ್ರ.ವ. ವರದಿಯನ್ನು ನಿ.ಪಿ-5 ಎಂದು, ಸಾಕ್ಷಿಯ ಸಹಿಯನ್ನು ನಿ.ಪಿ. 5(ಎ) ಎಂದು, ಸ್ಥಳ ಮಹಜರ್ ನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಅದನ್ನು ನಿ.ಪಿ.2 ಎಂದು ಈಗಾಗಲೇ ಗುರುತಿಸಲಾಗಿದ್ದು, ಅದರಲ್ಲಿನ ಸಾಕ್ಷಿಯ ಸಹಿಯನ್ನು ನಿ.ಪಿ. 2(ಬಿ)

ಎಂದು ಗುರುತಿಸಲಾಯಿತು. ನಿಪಿ-3 ಛಾಯಚಿತ್ರವನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಕಲಂಃ 65 ಬಿ ಪ್ರಮಾಣಪತ್ರವನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಪಿ-6 ಎಂದು, ಸಾಕ್ಷಿಯ ಸಹಿಯನ್ನು ನಿ.ಪಿ. 6 ಎ ಎಂದು ಗುರುತಿಸಲಾಯಿತು.

**ಪಾಟೀಸವಾಲುಃ ಆರೋಪಿ ಪರ ಶ್ರೀ ಎಂ ಎಂ ಎಂ ವಕೀಲರಿಂದಃ**

ದೂರನ್ನು 3 ದಿನ ತಡವಾಗಿ ನೀಡಲಾಗಿತ್ತು. ಚಾಸಾ-1 ರವರ ವಿರುದ್ಧ ಒಂದು ಪ್ರಕರಣ ದಾಖಲಾಗಿದೆ ಎಂದರೆ ಸರಿ. ಚಾಸಾ-1 ರವರ ಸುಳ್ಳು ದೂರಿಗೆ ಪೂರಕವಾಗಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ. ಪಂಚರಿಗೆ ನೋಟಿಸ್ ಜಾರಿಮಾಡಿರುವುದಿಲ್ಲ ಎಂದರೆ ಸರಿಯಲ್ಲ. ಮಹಜರ್ ನ್ನು ಠಾಣೆಯಲ್ಲಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿದಾರರ ಹೇಳಿಕೆ ಪಡೆದಿಲ್ಲ ಎಂದರೆ ಸರಿಯಲ್ಲ. ಚಾಸಾ-1 ರವರ ಮರುಹೇಳಿಕೆ ಪಡೆದಿಲ್ಲ ಎಂದರೆ ಸರಿಯಲ್ಲ. ಆರೋಪಿಗಳ ವಿರುದ್ಧ ಸುಳ್ಳು ಪ್ರ ವ ವರದಿಯನ್ನು ಹಾಕಿರುತ್ತೇನೆ ಎಂದರೆ ಸರಿಯಲ್ಲ. ಮಹಜರ್ ನ್ನು ಸ್ಥಳದಲ್ಲಿ ಮಾಡದೇ ಠಾಣೆಯಲ್ಲಿ ಸೃಷ್ಟಿ ಮಾಡಿಕೊಂಡಿರುತ್ತೇನೆ ಎಂದರೆ ಸರಿಯಲ್ಲ. ಛಾಯಾಚಿತ್ರವನ್ನು ಈ ಪ್ರಕರಣಕ್ಕಾಗಿ ಸೃಷ್ಟಿ ಮಾಡಿಕೊಂಡಿರುತ್ತೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಗಿದೆ )

ಓ ಹೇ ಕೇ ಸರಿಯಾಗಿದೆಯೆಂದು ಒಪ್ಪಿರುತ್ತಾರೆ.

2 ನೇ ಅಪರ ಸಿವಿಲ್ ನ್ಯಾಯಾಧೀಶರು

ಸಾಕ್ಷಿ ಸಹಿ

ಮತ್ತು ಜೆ ಎಂ ಎಫ್ ಸಿ , ಮದ್ದೂರು.